## ಗ್ರಾಮ ಲೆಕ್ಕಿಗರ ಕೊರತೆ

**399(655); ಶ್ರೀ ನಾರಾಯಣಗೌಡ (ಕೆ.ಆರ್.ಪೇಟೆ)**

ಅ) ಕೆ.ಆರ್.ಪೇಟೆ ತಾಲ್ಲೂಕು ಕಛೇರಿಯಲ್ಲಿ ಗ್ರಾಮಲೆಕ್ಕಿಗರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಕೊರತೆಯಿರುವ ಗ್ರಾಮಲೆಕ್ಕಿಗರನ್ನು ತುಂಬಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

ಇ) ಸದರಿ ಗ್ರಾಮಲೆಕ್ಕಿಗರನ್ನು ತುರ್ತು ಕಾರ್ಯ ನಿರ್ವಹಣೆಗಾಗಿ ನಿಯೋಜನೆ ಮೇಲೆ ತುಂಬಲು ಕ್ರಮ ಕೈಗೊಳ್ಳಲಾಗುವುದೇ; (ವಿವರ ನೀಡುವುದು)?

**ಶ್ರೀ ಎ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)**

ಅ) ಕೆ.ಆರ್. ಪೇಟೆ ತಾಲ್ಲೂಕಿನಲ್ಲಿ 16 ಗ್ರಾಮಲೆಕ್ಕಿಗರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗಿದ್ದು, ಈ ಸಂದರ್ಭದಲ್ಲಿ ಕೆ.ಆರ್.ಪೇಟೆ ತಾಲ್ಲೂಕಿನಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಇ) ಇತರೆ ಗ್ರಾಮಲೆಕ್ಕಿಗರನ್ನು ಖಾಲಿ ಇರುವ ಹುದ್ದೆಗಳಲ್ಲಿ ಹೆಚ್ಚಿನ ಪ್ರಭಾರದಲ್ಲಿಡುವ ಮೂಲಕ ಕಛೇರಿ ಕಾರ್ಯಗಳನ್ನು ನಿರ್ವಹಿಸಲು ಕ್ರಮ ಕೈಗೊಳ್ಳಲಾಗುತ್ತದೆ.